ಅಲ್ಲಾಹು ಭೂಮಿಯನ್ನು ಮುಷ್ಠಿಯಲ್ಲಿ ಹಿಡಿಯುತ್ತಾನೆ ಮತ್ತು ಆಕಾಶಗಳನ್ನು ಬಲಗೈಯಿಂದ ಸುರುಳಿಯಾಗಿ ಮಡಚುತ್ತಾನೆ. ನಂತರ ಹೇಳುತ್ತಾನೆ: ನಾನೇ ರಾಜ. ಭೂಮಿಯ ರಾಜರುಗಳು ಎಲ್ಲಿದ್ದಾರೆ?

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೀಗೆ ಹೇಳುವುದನ್ನು ನಾನು ಕೇಳಿದ್ದೇನೆ: "ಅಲ್ಲಾಹು ಭೂಮಿಯನ್ನು ಮುಷ್ಠಿಯಲ್ಲಿ ಹಿಡಿಯುತ್ತಾನೆ ಮತ್ತು ಆಕಾಶಗಳನ್ನು ಬಲಗೈಯಿಂದ ಸುರುಳಿಯಾಗಿ ಮಡಚುತ್ತಾನೆ. ನಂತರ ಹೇಳುತ್ತಾನೆ: ನಾನೇ ರಾಜ. ಭೂಮಿಯ ರಾಜರುಗಳು ಎಲ್ಲಿದ್ದಾರೆ?"
[صحيح] [متفق عليه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ತಿಳಿಸುವುದೇನೆಂದರೆ, ಪುನರುತ್ಥಾನ ದಿನದಂದು ಅಲ್ಲಾಹು ಭೂಮಿಯನ್ನು ಮುಷ್ಠಿಯಲ್ಲಿ ಹಿಡಿಯುತ್ತಾನೆ ಮತ್ತು ಆಕಾಶವನ್ನು ತನ್ನ ಬಲಗೈಯಿಂದ ಒಂದರ ಮೇಲೊಂದರಂತೆ ಸುರುಳಿಯಾಗಿ ಮಡಚುತ್ತಾನೆ. ನಂತರ ಅವುಗಳನ್ನು ನಾಶ ಮಾಡುತ್ತಾನೆ. ನಂತರ ಅವನು ಘೋಷಿಸುತ್ತಾನೆ: "ನಾನೇ ರಾಜ, ಭೂಮಿಯ ರಾಜರುಗಳು ಎಲ್ಲಿದ್ದಾರೆ?!"

http://www.sunnah.global/hadeeth/kn/show/65028